ಚುಟುಕು ಸುದ್ದಿ

ಮಾ.2 ಕ್ಕೆ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ

ಕೊಪ್ಪಳ: ಹಿಂದೂ ದಾರ್ಮಿಕ ದತ್ತಿ ಇಲಾಖೆಯ ಶ್ರೀ ಹುಲಿಗೆಮ್ಮದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಿಂದ ಮಾಂಗಲ್ಯ ಭಾಗ್ಯ ಯೋಜನೆಯ ಉಚಿತ ಸರಳ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಮಾರ್ಚ 2 ರಂದು ರವಿವಾರ ಪೂರ್ವಾಹ್ನ 12 ಗಂಟೆಗೆ ಶ್ರೀಕ್ಷೇತ್ರ ಶ್ರೀ ಹುಲಿಗೆಮ್ಮದೇವಿ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಗಂಗಾವತಿ ಶಾಸಕರಾದ ಜಿ.ಜನಾರ್ಧನರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ.ನಮೋಶಿ, ಡಾ.ಚಂದ್ರಶೇಖರ ಬಿ.ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ ನಭಿಸಾಬ ದೋಟಿಹಾಳ, ಹುಲಿಗಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ನೀಲಮ್ಮ ಗವಿಸಿದ್ದಪ್ಪ ಗುಂಗಾಡಿ ಅವರು ಪಾಲ್ಗೊಳ್ಳುವರು. ವಿಶೇಷ ಆಹ್ವಾನಿತರಾಗಿ ಕಂದಾಯ ಇಲಾಖೆ (ಧಾರ್ಮಿಕ ದತ್ತಿ ಇಲಾಖೆ) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ್ ಕುಮಾರ್ ಕಟಾರಿಯಾ, ಕೃಷ್ಣಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ ಮೋಹನ್ ರಾಜ್, ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಆಯುಕ್ತರಾದ ಡಾ. ಎಂ.ವಿ.ವೆಂಕಟೇಶ, ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಭಾಗವಹಿಸುವರು ಎಂದು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಯಂ.ಎಚ್ .ಪ್ರಕಾಶರಾವ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

0000000
000000

ಸಿದ್ದಾಪುರ: ಸಮಾಜದಲ್ಲಿ ಸ್ಥಿತಿವಂತರು ಸಾಕಷ್ಟಿದ್ದರೂ ಎಲ್ಲರಲ್ಲೂ ದಾನ ಮಾಡುವ ಮನಸ್ಸಿರಲ್ಲ. ಆದರೆ ಇರುವುದರಲ್ಲೇ ತಾಲೂಕಿನ ಐಗೋಡು ಸರ್ಕಾರಿ ಶಾಲೆಗೆ ಸ್ಥಳ ದಾನ ಮಾಡಿದ ಮುನೀರ್ ಹಾಗೂ ಹನೀಫ್ ಸಾಬ್ ನಿಜಕ್ಕೂ ಅಭಿನಂದನಾರ್ಹರು ಎಂದು ಶಾಸಕ ಭೀಮಣ್ಣ ನಾಯ್ಕ ಪ್ರಶಂಸಿದರು.

ತಾಲೂಕಿನ ಐಗೋಡಿನ ಸರ್ಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆಯ ನೂತನ ಕೊಠಡಿ ಉದ್ಘಾಟಿಸಿ ಮಾತನಾಡಿ, ಎಷ್ಟೋ ಜನ ಶ್ರೀಮಂತರಿದ್ದರೂ ಸಹ ದಾನ ಮಾಡುವ ಮನೋಭಾವ ಎಲ್ಲರಲ್ಲೂ ಇರಲ್ಲ. ಐಗೋಡ ಉರ್ದು ಶಾಲೆಗೆ ಜಾಗ ನೀಡಿದ ದಾನಿಗಳು ಇತರರಿಗೆ ಮಾದರಿಯಾಗಿದ್ದಾರೆ. ಸ್ಥಿತಿವಂತರು ಈ ರೀತಿಯ ಕಾರ್ಯಕ್ಕೆ ಮುಂದಾಗಬೇಕು ಎಂದರು.

ಕಾನಗೋಡು ಗ್ರಾಮ ಪಂಚಾಯತ ಅಧ್ಯಕ್ಷ ಕೃಷ್ಣಮೂರ್ತಿ ನಾಯ್ಕ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ತಾಲೂಕಾ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಚ್.ನಾಯ್ಕ, ಗ್ರಾಪಂ ಸದಸ್ಯರಾದ ಎಚ್. ಕೆ.ಶಿವಾನಂದ, ಲೀಲಾವತಿ ನಾಯ್ಕ, ಎಸ್.ಡಿ.ಎಂ.ಸಿ ಅಧ್ಯಕ್ಷ ಅಬ್ದುಲ್ ಅಜೀಂ ಸಾಬ್, ಸ್ಥಳದ ದಾನಿ ಮುನೀರ್ ಸಾಬ್, ಹನೀಫ್ ಸಾಬ್, ಸಾಮಾಜಿಕ ಮುಖಂಡರಾದ ಮುನಾವರ ಗುರ್ಕಾರ್, ನಾಸಿರ್ ಖಾನ್, ಅಬ್ದುಲ್ ಸಾಬ್ ಹೆರೂರ, ರಿಯಾಜ್ ಸಾಬ್ ಹೊಸೂರ ಮತ್ತಿತರರು ಉಪಸ್ಥಿತರಿದ್ದರು.

ಜೋಯಿಡಾ: ಜೋಯಿಡಾ ತಾಲೂಕಿನ ಕುಂಬಾರವಾಡಾದ ಮೈನೋಳ ಮೈದಾನದಲ್ಲಿ ನಡೆದ ಕುಂಬಾರವಾಡಾ ಪ್ರೀಮಿಯರ್ ಲೀಗ್ ಸೀಜನ್ 1 ಪಂದ್ಯಾವಳಿಯಲ್ಲಿ ಕುಂಬಾರವಾಡಾದ ಆಕಾಶ ಅನಸ್ಕರ ಮಾಲಕತ್ವದ ಶ್ಯಾಂಡಿಲ್ ಮಹಾರಾಜ ತಂಡ ಪ್ರಥಮ ಸ್ಥಾನ ಹಾಗೂ ಜುಬೇರ್ ಶೇಖ್ ಉಳವಿ ಮಾಲಕತ್ವದ ಕಾಂತಾರಾ ತಂಡ ದ್ವಿತೀಯ ಸ್ಥಾನ ಗಳೆಸಿದೆ. ಪ್ರಥಮ ಬಹುಮಾನ 30 ಸಾವಿರ ಹಾಗೂ ಟ್ರೋಫಿ ದ್ವಿತೀಯ ಬಹುಮಾನ 15 ಸಾವಿರ ಟ್ರೋಫಿ ಸಹಿತ ಎರಡು ತಂಡಗಳು ಪಡೆದುಕೊಂಡಿವೆ.

ನಾವು ಮಾಡುವ ಕೆಲಸಗಳು ಇನ್ನೊಬ್ಬರಿಗೆ ಮಾದರಿಯಾಗಲಿ

ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಟಿ ಎಮ್ ಭಾಸ್ಕರ್ ಕರೆ

ಉದಯಕಾಲ ನ್ಯೂಸ್

ಶಿಗ್ಗಾಂವಿ: ಕಲಾ ಪೋಷಕರು ಧಾನಿಗಳು ಇದ್ದಾಗ ಮಾತ್ರ ಕಲೆ ಉಳಿಯಲು ಸಾಧ್ಯ, ಪ್ರೊ. ಟಿ ಎಮ್ ಭಾಸ್ಕರ್ ನಾವು ಮಾಡುವ ಒಳ್ಳೆಯ ಕೆಲಸಗಳು ನಮ್ಮನ್ನು ಪುಣ್ಯದ ಕಡೆಗೆ ಕೊಂಡೋಯುತ್ತವೆ ಹಾಗೆಯೇ ನಾವು ಮಾಡುವ ಕೆಲಸಗಳು ಇನ್ನೊಬ್ಬರಿಗೆ ಮಾದರಿಯಾಗಬೇಕು ಎಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಟಿ ಎಮ್ ಭಾಸ್ಕರ್ ಅವರು ಹೇಳಿದರು.

ತಾಲೂಕಿನ ಹುಲಸೋಗಿ ಗ್ರಾಮದಲ್ಲಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಹಾಗೂ ಹುಲಸೋಗಿ ಗ್ರಾಮದ ದೊಡ್ಡಾಟ ಕಲಾ ಭಳಗದ ವತಿಯಿಂದ ಹಮ್ಮಿಕೊಂಡ ಪುಸ್ತಕ ಬಿಡುಗಡೆ ಹಾಗೂ ದೊಡ್ಡಾಟ ಕಲಾವಿದರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ಮಾತನಾಡಿದ ಅವರು ಕರ್ನಾಟಕ ಜಾನಪದ ವಿಶ್ವವಿದ್ಯಾಲಯಕ್ಕೂ ಹಾಗೂ ಹುಲಸೋಗಿ ಗ್ರಾಮಕ್ಕೂ ಅವಿನಾಭಾವ ಸಂಬಂಧವಿದೆ ದೊಡ್ಡಾಟ ಕಲೆ ಉಳಿಯಲು ಹುಲಸೋಗಿ ಗ್ರಾಮದ ಕಲಾವಿದರ ಶ್ರಮ ಬಹಳ ಇದೆ ಹಾಗಾಗಿ ಹುಲಸೋಗಿ ಗ್ರಾಮವನ್ನ ದೊಡ್ಡತದ ತೊಟ್ಟಿಲು ಎಂದರೆ ತಪ್ಪಾಗಲಾರದು ಆ ತೊಟ್ಟಿಲು ನಿರಂತರವಾಗಿ ತೂಗುತ್ತಿರಬೇಕು ಅಂದರೆ ದೊಡ್ಡಾಟ ಕಲೆಯನ್ನು ಜೀವಂತವಾಗಿಡಬೇಕು ಅದಕ್ಕೆ ವಿಶ್ವವಿದ್ಯಾಲಯದ ಸಹಕಾರ ಸದಾ ಇರುತ್ತದೆ

ದೊಡ್ಡಾಟ ಕಲೆ ಉಳಿಯಲು ಯುವಕರು ಕಲೆ ಕಲಿಯಬೇಕು ಮತ್ತು ಪ್ರೋತ್ಸಾಹಿಸಬೇಕು ಆ ನಿಟ್ಟಿನಲ್ಲಿ ಎಮ್ ಎಸ್ ಮಾಳವಾಡ ಅವರು ವಿಶೇಷವಾದ ಆಸಕ್ತಿ ವಹಿಸಿ ಎರಡು ದೊಡ್ಡಾಟದ ಪುಸ್ತಕಗಳು ರಚಿಸಿದ್ದಾರೆ ಎಂದರು.

ಹಿರಿಯ ಸಾಹಿತಿಗಳಾದ ಡಾ. ಬಾಳಸಾಹೇಬ್ ಲೋಕಾಪುರ ಅವರು ಪುಸ್ತಕದ ಬಗ್ಗೆ ಮಾತನಾಡಿ ವೀರ ವೀರಾಗಿ ಬಾಹುಬಲಿ ದೊಡ್ಡಾಟದ ಪುಸ್ತಕವು ಭರತ ಬಾಹುಬಲಿಯ ಚರಿತ್ರೆಯನ್ನು ತಿಳಿಸುವದರ ಜೊತೆಗೆ ನಮ್ಮ ನೆಲಮೂಲ ಸಂಸ್ಕೃತಿಯ ಸೊಗಡನ್ನು ಬಿತ್ತರಿಸುತ್ತದೆ ಎಂದರು.

ಇನ್ನೋರ್ವ ಪುಸ್ತಕ ವಿಮರ್ಶಕರಾದ ಡಾ. ಜಿನದತ್ತ ಹಡಗಲಿ ಮಾತನಾಡಿ ಎಲ್ಲವುದಕ್ಕೂ ಮೂಲ ಜಾನಪದ ರಂಗಭೂಮಿ ಅದರಲ್ಲಿಯೂ ವಿಶೇಷವಾಗಿ ಭಯಲಾಟ ರಂಗಭೂಮಿಗೆ ತನ್ನದೇ ಆದ ಇತಿಹಾಸವಿದೆ ಇಂದು ಎಮ್ ಎಸ್ ಮಾಳವಾಡ ಅವರು ಕೃತಿಗಳು ಇಂದಿನ ಕಲಾಕ್ಷೇತ್ರಕ್ಕೆ ಒಳ್ಳೆ ಕೊಡುಗೆಯಾಗಲಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಫಕ್ಕೀರೇಶ ಕೊಡಾಯಿ ಮಾತನಾಡಿ ಹುಲಸೋಗಿ ಗ್ರಾಮದ ಹೆಸರು ಇಡಿ ದೇಶಕ್ಕೆ ಪ್ರಚಾರವಾಗಲು ಕಾರಣಿಕರ್ತರು ಡಾ. ಟಿ. ಬಿ ಸೋಲಬಕ್ಕನವರ ಅವರು ನಮ್ಮಂತ ಅನೇಕರಿಗೆ ಕಲಾ ಕ್ಷೇತ್ರದಲ್ಲಿ ಮಾರ್ಗದರ್ಶನ ಮಾಡಿದ್ದರಿಂದ ಇಂದು ಸಮಾಜ ನಮ್ಮನ್ನು ಗುರುತ್ತಿಸುತ್ತಿದೆ ಅವರ ಸೇವೆಯನ್ನು ನಾವು ಯಾವತ್ತೂ ಮರಿಯುವದಿಲ್ಲ ಎಂದರು.

ಜಾನಪದ ಕಲಾವಿದರಾದ ಶಂಬಯ್ಯಾ ಹಿರೇಮಠ ಉಪನ್ಯಾಸ ನೀಡಿದರು.

ಎಮ್ ಎಸ್ ಮಾಳವಾಡ ಸಾವಿತ್ರಮ್ಮ ತಿಪ್ಪಣ್ಣ ಸೊಲಬಕ್ಕನವರ ಫಕ್ಕೀರೇಶ ಬಿಸಟ್ಟಿ ಹಾಗೂ ಹಿರಿಯ ದೊಡ್ಡಾಟದ ಕಲಾವಿದರನ್ನು ಇದೆ ಸಂಧರ್ಭದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಕೃತಿ ರಚನೆಕಾರರಾದ ಎಮ್ ಎಸ್ ಮಾಳವಾಡ ಹಿರಿಯ ಸಾಹಿತಿ ಸತೀಶ್ ಕುಲಕರ್ಣಿ ಡಾ. ಜಗನಾಥ ಗೆಣಣ್ಣವರ ಮಾತನಾಡಿದರು.

ಈ ಸಂಧರ್ಭದಲ್ಲಿ ಕೊಟ್ರೇಶ್ ಮಾಸ್ತರ ಬೆಳಗಲಿ ಎಸ್ ಎಫ್ ಮನಕಟ್ಟಿ ನಾಗರಾಜ ಸಿಂಧೆ ಪರಿಮಳ ಜೈನ ಬಸವರಾಜ ಶಿಗ್ಗಾವಿ ಹಾಗೂ ಇತರರು ಹಾಜರಿದ್ದರು.

ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಫಕ್ಕೀರೇಶ ಕೊಡಾಯಿ ಪ್ರಾಸ್ತವಿಕವಾಗಿ ಮಾತನಾಡಿದರು ಡಾ. ಚಂದ್ರಪ್ಪ ಸೊಬಟಿ ಸ್ವಾಗತಿಸಿದರು ಬಸವರಾಜ ಶಿಗ್ಗಾವಿ ಹಾಗೂ ತಂಡದವರು ಪ್ರಾರ್ಥಿಸಿದರು ಜನಪದ ಕಲಾವಿದ ಶರೀಫ ಮಾಕಪ್ಪನವರ ಕಾರ್ಯಕ್ರಮ ನಿರೂಪಿಸಿದರು.

ಶೈಕ್ಷಣಿಕ ಹಿತಕ್ಕೆ ಧಕ್ಕೆಯಾಗುವಂಥ ವರ್ತನೆ ಸಹಿಸುವುದಿಲ್ಲ: ಶಾಸಕ ಶ್ರೀನಿವಾಸ

ಉದಯಕಾಲ ನೂಸ್

ಹಾನಗಲ್: ಸಭೆ, ಸಮಾರಂಭಗಳ ನೆಪದಲ್ಲಿ ಶಿಕ್ಷಕರು ಶಾಲೆಗೆ ಚಕ್ಕರ್ ಹೊಡೆಯುವಂತಿಲ್ಲ, ಶಾಲಾವಧಿಯಲ್ಲಿ ತಮ್ಮ ಹೊಲ, ಗದ್ದೆ, ತೋಟಗಳಿಗೆ ಓಡಾಡುವಂತಿಲ್ಲ, ವ್ಯಾಪಾರ, ವಹಿವಾಟಿನಲ್ಲಿ ತೊಡಗುವಂತಿಲ್ಲ, ಶೈಕ್ಷಣಿಕ ಹಿತಕ್ಕೆ ಧಕ್ಕೆಯಾಗುವಂಥ ವರ್ತನೆಗಳನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಶಾಸಕ ಶ್ರೀನಿವಾಸ ಮಾನೆ ತಾಕೀತು ಮಾಡಿದರು.

ಗುರುವಾರ ಇಲ್ಲಿನ ತಹಶೀಲ್ದಾರ್ ಕಚೇರಿಯಲ್ಲಿ ನಡೆದ ತಾಲೂಕಾ ಮಟ್ಟದ ಶಿಕ್ಷಣ ಸುಧಾರಣಾ ಸಮಿತಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಸೇವೆ ಸಲ್ಲಿಸುವ ಶಿಕ್ಷಕರ ಸಂಖ್ಯೆ ತಾಲೂಕಿನಲ್ಲಿ ಹೆಚ್ಚಿದೆ. ಆದರೆ ಕೆಲ ಶಿಕ್ಷಕರು ವೃತ್ತಿಲೋಪ ತೋರುತ್ತಿರುವುದನ್ನು ಗಮನಿಸಿದ್ದೇನೆ. ಯಾವುದೇ ಕಾರಣಕ್ಕೂ ಮುಂದೆ ಹೀಗಾಗಬಾರದು. ಶೈಕ್ಷಣಿಕ ಯೋಜನೆಗಳು ಸಮರ್ಪಕವಾಗಿ ಜಾರಿಯಾಗಬೇಕು. ಶಾಲೆಗಳಲ್ಲಿ ಸರಿಯಾದ ಸಮಯಕ್ಕೆ ಪಾಠ ಪ್ರವಚನಗಳು ನಡೆಯಬೇಕು. ಈ ವಿಚಾರದಲ್ಲಿ ಯಾವುದೇ ಕಾರಣಕ್ಕೂ ರಾಜಿ ಇಲ್ಲ. ಅಧಿಕಾರಿಗಳು ನಿಗಾ ವಹಿಸುವಂತೆ ಸೂಚಿಸಿದರು.

ಕರ್ತವ್ಯ ಲೋಪ ತೋರುತ್ತಿರುವ ಶಿಕ್ಷಕರನ್ನು ಗುರುತಿಸಿ, ಈಗಲೇ ಕಟ್ಟುನಿಟ್ಟಿನ ಸೂಚನೆ ನೀಡಿ. ಶಾಲೆಗಳಲ್ಲಿಯೇ ತಂಬಾಕು, ಗುಟ್ಕಾ ಸೇವಿಸುವುದು, ತರಗತಿಯಲ್ಲಿ ಮೊಬೈಲ್ ಬಳಸುವುದು, ವಿದ್ಯಾರ್ಥಿಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುವ ವರ್ತನೆಗಳು ಶಿಕ್ಷಕರಿಂದ ನಡೆಯಬಾರದು ಎಂದರು. ಕೆಲ ಶಾಲೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಶೂ, ಸಾಕ್ಸ್, ಸಮವಸ್ತ್ರ ಧರಿಸದೇ ಇರುವುದನ್ನು ಗಮನಿಸಿದ್ದೇನೆ. ಸರ್ಕಾರದ ಯೋಜನೆಗಳು ಸದ್ಬಳಕೆಯಾಗಬೇಕು. ದುರುಪಯೋಗ ಆಗುವುದನ್ನು ತಡೆಯಬೇಕಿದೆ ಎಂದರು.

ಶೈಕ್ಷಣಿಕ ಕ್ಷೇತ್ರಕ್ಕೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಶ್ರಮ ವಹಿಸಲಾಗಿದೆ. ದಾನಿಗಳು ಹಾಗೂ ವೈಯಕ್ತಿಕ ನೆರವಿನಿಂದ ಒಂದೂವರೆ ಕೋಟಿ ರೂ. ವೆಚ್ಚದಲ್ಲಿ 92 ಶಾಲೆಗಳಿಗೆ ಸೌಲಭ್ಯ ಒದಗಿಸಲಾಗಿದೆ. ಪ್ರತಿ ಶಾಲೆಗಳಲ್ಲಿಯೂ ಸಹ ಹಳೆ ವಿದ್ಯಾರ್ಥಿಗಳ ಸಂಘ ರಚಿಸಬೇಕು. ಸಮುದಾಯದ ಸಹಭಾಗಿತ್ವದೊಂದಿಗೆ ಸೌಲಭ್ಯಗಳನ್ನು ಪಡೆದುಕೊಳ್ಳುವಲ್ಲಿ ಶಿಕ್ಷಕರು ಕಾಳಜಿ ವಹಿಸಬೇಕಿದೆ ಎಂದು ಶ್ರೀನಿವಾಸ ಮಾನೆ ಹೇಳಿದರು.

ತಹಶೀಲ್ದಾರ್ ರೇಣುಕಾ ಎಸ್., ತಾಪಂ ಇಒ ಪರಶುರಾಮ ಪೂಜಾರ, ಬಿಇಒ ವಿ.ವಿ.ಸಾಲಿಮಠ, ಹಾವೇರಿಯ ಡಯಟ್ ಪ್ರಾಚಾರ್ಯ ಗಿರೀಶ್ ಪದಕಿ, ಸಮಿತಿಯ ಸದಸ್ಯರಾದ ಮೆಹಬೂಬ ಬ್ಯಾಡಗಿ, ಬಸವರಾಜ ಕರೆಣ್ಣನವರ, ಬಸವರಾಜ ಚವ್ಹಾಣ, ಅನಿತಾ ಶಿವೂರ, ಅಬ್ದುಲಗನಿ ಪಟೇಲ, ಹೆಗ್ಗಪ್ಪ ಕಾಮನಹಳ್ಳಿ, ಚಂದ್ರಶೇಖರ ಬಳ್ಳಾರಿ ಇದ್ದರು.

ನರೇಗಲ್ಲ : ಪಟ್ಟಣದ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ವತಿಯಿಂದ ಶಿವರಾತ್ರಿ ಮಹೋತ್ಸವ ಅಂಗವಾಗಿ ಪಟ್ಟಣದಲ್ಲಿ ಬುಧವಾರ ಜ್ಯೋತಿರ್ಲಿಂಗಗಳ ಶೋಭಾಯಾತ್ರೆ ಜರುಗಿತು. ಗಜೇಂದ್ರಗಡ ರಸ್ತೆಯಲ್ಲಿವ ಬ್ರಹ್ಮಕುಮಾರ ಈಶ್ವರೀಯ ವಿಶ್ವ ವಿದ್ಯಾಲಯದಿಂದ ಆರಂಭವಾದ ಯಾತ್ರೆ ಪಟ್ಟಣದ ಹಳೆ ಬಸ್ ನಿಲ್ದಾಣ, ಅಂಬೇಡ್ಕರ ನಗರ, ಜಕ್ಕಲಿ ಕ್ರಾಸ್, ಹೊಸ್ ನಿಲ್ದಾಣ, ಪಟ್ಟಣ ಪಂಚಾಯಿತಿ ಮುಂಬಾಗ, ಮಾಜಿಗೌಡ್ರ ಪ್ರಸ್, ದ್ಯಾಮಮ್ಮನ ದೇವಸ್ಥಾನ, ಗಣೇಶ ದೇವಸ್ಥಾನ, ವೀರಣ್ಣಪಾದಗಟ್ಟಿ, ನಾಗರಕೆರೆ, ದರ್ಗಾ ಸೇರಿದಂತೆ ಪಟ್ಟಣದ ವಿವಿಧ ಪ್ರಮುಖ ಬೀದಗಳಲ್ಲಿ ಹೆಜ್ಜೆ ಮೇಳಿಗಳೊಂದಿಗೆ ಮೆರವಣಿಗೆ ಸಂಭ್ರಮದಿಂದ ಜರುಗಿತು.

ಹಂಪಿ ಉತ್ಸವ: ತುಂಗಭದ್ರೆಗೆ ಆರತಿ

ಉದಯಕಾಲ ನೂಸ್

ವಿಜಯನಗರ (ಹೊಸಪೇಟೆ): ಹಂಪಿ ಉತ್ಸವದ ಅಂಗವಾಗಿ ಬುಧವಾರ ಸಂಜೆ ವಿರೂಪಾಕ್ಷೇಶ್ವರ ದೇವಸ್ಥಾನ ಹಿಂಭಾಗದ ನದಿ ತಟದಲ್ಲಿ ತುಂಗಭದ್ರೆಗೆ ತುಂಗಾರತಿ ಮಾಡುವ ಮೂಲಕ ನಾಡಿನ ಸುಭೀಕ್ಷೆಗೆ ಪ್ರಾರ್ಥಿಸಲಾಯಿತು.

ತಾಯಿ ಭುವನೇಶ್ವರಿ ದೇವಿಗೆ ಕುಂಕುಮಾರ್ಚನೆ ಹಾಗೂ ಅಭಿಷೇಕ ನೆರವೇರಿಸಲಾಯಿತು.ವಸತಿ, ಅಲ್ಪಸಂಖ್ಯಾತರ ಕಲ್ಯಾಣ, ವಕ್ಫ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಸೇರಿದಂತೆ ಗಣ್ಯಮಾನ್ಯರು ತುಂಗಾಭದ್ರ ನದಿಗೆ ಹೂವು, ಕ್ಷೀರ, ತುಪ್ಪ, ಮರದ ಬಾಗಿನ ಸಮರ್ಪಿಸಿದರು. ಗಂಗೆ ಸೇರಿದಂತೆ ನಾಡಿನ ಪವಿತ್ರ ನದಿಗಳು, ವರುಣ ದೇವನನ್ನು ಸ್ಮರಿಸಿ ತುಂಗಾರತಿ ಕೈಗೊಳ್ಳಲಾಯಿತು.ಈ ಬಾರಿ ನಾಡಿನಾದ್ಯಂತ ಉತ್ತಮ ಮಳೆಯಾಗಿ, ಎಲ್ಲ ನದಿಗಳು ತುಂಬಿ ಹರಿಯಲಿ. ಜಲಾಶಯಗಳು ಭರ್ತಿಯಾಗಿ, ರೈತರು ಉತ್ತಮ ಬೆಳೆ ಬೆಳೆದು ನಾಡು ಸುಭೀಕ್ಷವಾಗಲಿ ಎಂದು ಹಂಪಿ ವಿರೂಪಾಕ್ಷ ಸೇರಿದಂತೆ ಸಮಸ್ತ ದೇವತೆಗಳಲ್ಲಿ ಪ್ರಾರ್ಥಿಸಲಾಯಿತು.

ವಿರೂಪಾಕ್ಷ ವಿದ್ಯಾರಣ್ಯ ಗುರುಗಳು, ಹಂಪಿ ವಿರೂಪಾಕ್ಷೇಶ್ವರ ದೇವಸ್ಥಾನದ ಪ್ರಧಾನ ಅರ್ಚಕ ಶ್ರೀನಾಥ ಹಾಗೂ ಮೋಹನ್ ಜೋಶಿ ನೇತೃತ್ವದ ತಂಡ ತುಂಗಾರತಿ ಕಾರ್ಯಕ್ರಮವನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿತು.

ಶಾಸಕ ಹೆಚ್.ಆರ್.ಗವಿಯಪ್ಪ, ಜಿಲ್ಲಾಧಿಕಾರಿ ಎಂ.ಎಸ್ .ದಿವಾಕರ ಧರ್ಮಪತ್ನಿಯರ ಸಮೇತವಾಗಿ ತುಂಗಾರತಿ ಸಂಕಲ್ಪ ಕೈಗೊಂಡರು.

ಜಿ.ಪಂ.ಸಿಇಒ ನೋಂಗ್ಜಾಯ್ ಮೋಹಮ್ಮದ್ ಅಲಿ ಅಕ್ರಮ್ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿಬಾಬು.ಬಿ.ಎಲ್ ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ, ಸಹಾಯಕ ಆಯುಕ್ತ ವಿವೇಕ್, ತಹಶೀಲ್ದಾರ್ ಶೃತಿ ಮಾಳಪ್ಪ ಗೌಡ, ಡಿಹೆಚ್ಓ ಶಂಕರ್ ನಾಯ್ಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗರಂಗಣ್ಣನವರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮಕ್ಕೆ ಸಾಕ್ಷಿಯಾದರು. ತುಂಗಾರತಿ ಅಂಗವಾಗಿ ಬಾನಂಗಳದಲ್ಲಿ ಪಟಾಕಿ ಸಿಡಿಸಿ ಸಂತಸ ಹಂಚಿಕೊಳ್ಳಲಾಯಿತು.ಹೊಸಪೇಟೆ ನಗರದ ಗಗನ ಮತ್ತು ಅವರ ತಂಡ ಭರತನಾಟ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಗಳನ್ನು ಪ್ರಸ್ತುತ ಪಡಿಸಿದರು.

ಮಂಗನ ಕಾಯಿಲೆಗೆ ಸಂಬಂಧಿಸಿದ ಪ್ರಯೋಗಾಲಯ ಪ್ರಾರಂಭಿಸಿ: ಶಾಸಕ ಭೀಮಣ್ಣ

**ಸಾರ್ವಜನಿಕರ ಸಹಕಾರದಿಂದ ಪ್ರಾಣಿಗಳ ಭೇಟೆಯಾಡುವುದು ಹಾಗೂ